# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ರಾಜಾಜಿನಗರ ಉಪವಿಭಾಗದ ವಾರ್ಡ್ ನಂ. 107 ಶಿವನಗರ ಕಛೇರಿಯಲ್ಲಿ ದಿನಾಂಕ: 12.05.2021 ರಂದು ನಡೆದ ಮೀಟಿಂಗ್ ನಡುವಳಿಗಳು:-**

************

ವಿಷಯ: ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿ 'Ward Decentralized Triage and Emergency Response [DETER] ' Committee for Covid-19 Management [WDC] ರಚಿಸುವ ಕುರಿತು.

ಉಲ್ಲೇಖ: 1. ವಾರ್ಡ್ ಕಮಿಟಿ ನೋಡಲ್ ಅಧಿಕಾರಿಗಳನ್ನು ನೇಮಿಸಿರುವ ಕಛೇರಿ ಆದೇಶದ ಸಂಖ್ಯೆ: ಬಿ12[5]ಪಿಆರ್/35/20-21. ದಿನಾಂಕ: 16.04.2021

2. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: RD 158 TNR 2020, DT: 07.05.2021

3. ಈ ಕಛೇರಿಯ ಸಭಾ ಸೂಚನೆ ಪತ್ರದ ದಿನಾಂಕ: 12.05.2021

*************

ಉಲ್ಲೇಖ [1]ರ ಸಭಾ ಸೂಚನಾ ಪತ್ರದ ಅನುಸಾರ ಉಲ್ಲೇಖ [2]ರ ಆದೇಶದ ಅಂಶಗಳನ್ನು ಪರಿಶೀಲಿಸಲು ದಿನಾಂಕ: 12.05.2021 ರಂದು ಶಿವನಗರ ವಾರ್ಡ್ ನಂ. 107ರಲ್ಲಿ ವಾರ್ಡ್ ಕಮಿಟಿ ಸಮಿತಿ ಸಭೆಯನ್ನು ಉಲ್ಲೇಖ ಪತ್ರ 3ರಂತೆ ಬೆಳಗ್ಗೆ 11.00 ಗಂಟೆಗೆ ಕರೆಯಲಾಗಿದ್ದು, ಸದರಿ ಸಭ್ಯ ನಡುವಳಿಗಳು

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀಮತಿ ಡಾ॥ ಪೂಜಾ, ವೈದ್ಯರು, ನಾಗರಾಜ್ ಹೆರಿಗೆ ಆಸ್ಪತ್ರೆ
3. ಶ್ರೀ ಸುಬ್ರಮಣಿ, ಹಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ಶರಣಬಸವ, ಮಾರ್ಷಲ್
6. ಶ್ರೀ ಮಹೇಶ್, ಘನತ್ಯಾಜ್ಯ ಮೇಲ್ವಿಚಾರಕರು
7. ಶ್ರೀ ರಮೇಶ್ ಪಶುಪಾಲನೆ ಪರಿವೀಕ್ಷಕರು
8. ಶ್ರೀ ಶ್ರೀನಾಥ್ ಅರಣ್ಯ ಇಲಾಖೆ

ಶ್ರೀ ಸೋಮಶೇಖರ್.ಜಿ.ಎಲ್. ಸದಸ್ಯರು ಕಾರ್ಯದರ್ಶಿಗಳು ಕಮಿಟಿ ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ಸ್ವಾಗತಿಸಿದರು .

ಶ್ರೀ ಲಿಂಗಣ್ಣ ಗುಂಡಳ್ಳಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ, ವಾರ್ಡ್ ನಂ. 107ರ ವಾರ್ಡ್ ಕಮಿಟಿ ರವರು ಮಾತನಾಡುತ್ತಾ, 2ರ ಆದೇಶವನ್ನು ವಿವರಿಸುತ್ತಾ, ವಾರ್ಡ್ ನಂ. 107ರಲ್ಲಿ Ward Decenitralized Triage and Emergency Response [DETER] Committee for Covid-19 Management [WDC] ಯ ಸಮಿತಿ ರಚನೆ ವಾರ್ಡ್ ಮಟ್ಟದ ಕೋವಿಡ್ ನಿರ್ವಹಣೆ WDC [ವಾರ್ಡ್ ತಡೆ ಸಮಿತಿ] ವಿಕೇಂದ್ರಿಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಕೇಂದ್ರದ ರಚನೆ ಸ್ವರೂಪ , ಕಾರ್ಯವಿಧಾನ ಅಗತ್ಯತೆ ಹಾಗೂ ಕೋವಿಡ್-19ರ ನಿಯಂತ್ರಣ ಹಾಗೂ ಚಿಕಿತ್ಸೆ ಸಂಬಂಧ ತೆಗೆದುಕೊಳ್ಳಬೇಕಾದ ಕಾರ್ಯಗಳ ಬಗ್ಗೆ ಸಭೆಗೆ ವಿವರವಾಗಿ ತಿಳಿಸಿದರು.

ಪು.ತಿ.ನೋ.

Scanned by CamScanner

1. ಹಿಂದಿನ ಸಭೆಗಳಲ್ಲಿ ನಿರ್ಣಯಗಳ ಅನುಪಾಲನೆ ಹಾಗೂ ಸಾರ್ವಜನಿಕರಿಗೆ ಸಮರ್ಪಕ ಸೇವೆ ನೀಡುವ ಬಗ್ಗೆ ಹಿಂದಿನ ಸಭೆಗಳಲ್ಲಿ ತೆಗೆದುಕೊಂಡ ನಿರ್ಧಾರಗಳಿಗೆ ಅನುಪಾಲನೆ ಮತ್ತು ವಾರ್ಡ್‌ಗಳಲ್ಲಿ ಸಾರ್ವಜನಿಕರ ದಿನನಿತ್ಯ ಮೂಲಭೂತ ಸೌಕರ್ಯಗಳು ಹಾಗೂ ಸೇವೆ ಒದಗಿಸುವ ಸಂಬಂಧ ನಿರಂತರವಾಗಿ ಕ್ರಮ ವಹಿಸಲು ಹಾಜರಿದ್ದ ಎಲ್ಲಾ ಬಿ.ಬಿ.ಎಂ.ಪಿ. ಅಧಿಕಾರಿ ಸಿಬ್ಬಂದಿಯವರಿಗೆ ತಿಳಿಸಿದರು.
2. ಕೋವಿಡ್-19 ನಿಯಂತ್ರಣ ಸಂಬಂಧ [DETER] ಸಮಿತಿ ರಚನೆ ಹಾಗೂ ತೆಗೆದುಕೊಳ್ಳಬೇಕಾದ ಕ್ರಮಗಳ ಬಗ್ಗೆ.

1. 'Physical Triaging' ಹಾಗೂ ವಾರ್ಡ್ ವಾರ್ ರೂಂ ಸ್ಥಾಪನೆಗಾಗಿ ಸೂಕ್ತ ಕಟ್ಟಡ ಸ್ಥಳವಕಾಶ ಗುರುತಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸೂಕ್ತ ಅಗತ್ಯ ಕೇಂದ್ರ ಸ್ಥಾಪಿಸಲು ಕ್ರಮ ವಹಿಸಲು ನಿರ್ಧರಿಸಲಾಯಿತು.
2. ವಾರ್ಡ್‌ನ ವಾರ್ ರೂಂಗೆ ಪ್ರತ್ಯೇಕ ಅಗತ್ಯವಿರುವ ಟೆಲಿಫೋನ್, ಕಾಲ್ ಸೆಂಟರ್ ಸೌಲಭ್ಯ ಒದಗಿಸಲು ವಲಯವಾರು ಆದೇಶದಂತೆ ಕ್ರಮಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು.
3. ವಾರ್ಡ್‌ವಾರು ಸ್ವಯಂ ಸೇವಕರನ್ನು ನಿಯಮಾನುಸಾರ ನೋಂದಾಯಿಸಿಕೊಳ್ಳುವುದು, ವಾರ್ಡಿನಲ್ಲಿ ವೈದ್ಯರು, ಪ್ಯಾರಾಮೆಡಿಕಲ್ ಸಿಬ್ಬಂದಿಯವರನ್ನು ಗುರುತಿಸಿ, ಅಗತ್ಯ ವಿವರ ಸಂಗ್ರಹಣೆ ಹಾಗೂ RWA ಗಳನ್ನು ಸೇರಿಸಿಕೊಂಡು ಸರ್ಕಾರಿ ಆದೇಶದ ಪ್ರಕಾರ ಕಾರ್ಯವಾರು ಗುಂಪು ರಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.
4. ವಾರ್ಡ್ ಮಟ್ಟದ ಇಲಾಖಾ ಅಧಿಕಾರಿಗಳು ಕೋರ್ ಗ್ರೂಪ್, ಎನ್.ಜಿ.ಓ ಹಾಗೂ ಸ್ವಯಂ ಸೇವಕರ ಗ್ರೂಪ್ ಮತ್ತು ಆಸ್ಪತ್ರೆ/ಹೋಮ್ ಐಸೋಲೇಷನ್ ಗಮನಿಸುವಿಕೆ, ವೈದ್ಯಕೀಯ ಸಿಬ್ಬಂದಿಗಳ ವಾಟ್ಸ್ ಅಫ್ ಗ್ರೂಫ್‌ಗಳನ್ನು ರಚಿಸಿ ಸಕ್ರಿಯಗೊಳಿಸಿಕೊಳ್ಳಲು ತೀರ್ಮಾನಿಸಲಾಯಿತು.
5. ಬಿ.ಬಿ.ಎಂ.ಪಿ ಕೇಂದ್ರ ಕಛೇರಿಯಿಂದ ನೀಡಲ್ಪಡುವ ಸೂಚನೆಗಳು ಹಾಗೂ ಮಾರ್ಗ ಸೂಚಿಗಳು, ಸರ್ಕಾರಿ ಆದೇಶಗಳು, ವಲಯ ಕಛೇರಿಯ ಆದೇಶ ಅನುಸಾರ, ಆಧ್ಯತೆ ಮೇಲೆ ಕ್ರಮ ವಹಿಸಲು ತೀರ್ಮಾನಿಸಲಾಯಿತು.
6. ನೋಡಲ್ ಅಧಿಕಾರಿಗಳು, ಮಾತನಾಡುತ್ತಾ, ವಾರ್ಡ್ ಪ್ರದೇಶದಲ್ಲಿ ಲಸಿಕೆ ನೀಡುವ ಸ್ಥಳ ಮತ್ತು ದಿನಾಂಕವನ್ನು ಮುಂಚಿತವಾಗಿ ಸಾರ್ವಜನಿಕರಿಗೆ ಮಾಹಿತಿಯನ್ನು ನೀಡಬೇಕೆಂದು ತಿಳಿಸಿದರು.
7. ವಾರ್ಡ್ ನಂ. 107ರಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ ಹಾಗೂ ಓಎಫ್.ಸಿ. ಸಮಸ್ಯೆಗಳ ಬಗ್ಗೆ ಸಾರ್ವಜನಿಕರು ಕೇಳಿರುವ ಸಮಸ್ಯೆಗಳ ಬಗ್ಗೆ ವಾರ್ಡ್ ಅಭಿಯಂತರರು ರವರು ಬಗೆಹರಿಸಿರುವುದಾಗಿ ತಿಳಿಸಿರುತ್ತಾರೆ.

ಈ ಎಲ್ಲಾ ಕ್ರಮಗಳನ್ನು ತ್ವರಿತವಾಗಿ ಆದ್ಯತೆ ಮೇಲೆ ಕೈಗೊಂಡು ಮುಂಬರುವ ಸಭೆಯಲ್ಲಿ ಮಂಡಿಸಲು ಸೂಚಿಸಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

Scanned by CamScanner

ದಿನಾಂಕ: 21.05.2021ರಂದು ಬೆಳಿಗ್ಗೆ 10.00 ಗಂಟೆಗೆ ಶಿವನಗರ ವಾರ್ಡ್ ನಂ. 107 ರಲ್ಲಿ ನೋಡಲ್ ಅಧಿಕಾರಿಯವರಾದ ಶ್ರೀ ಲಿಂಗಣ್ಣ ಗುಂಡಳ್ಳಿ, ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಸೋಮಶೇಖರ್.ಜಿ.ಎಲ್ ಸಹಾಯಕ ಅಭಿಯಂತರರು, ವಾರ್ಡ್ ನಂ. 107 ಶಿವನಗರ
2. ಶ್ರೀಮತಿ ಡಾ॥ ಪೂಜಾ, ವೈದ್ಯರು, ನಾಗರಾಜ್ ಹೆರಿಗೆ ಆಸ್ಪತ್ರೆ
3. ಶ್ರೀಮತಿ ಡಾ॥ ಸಿಂಧು, ವೈದ್ಯರು, ನಾಗರಾಜ್ ಹೆರಿಗೆ ಆಸ್ಪತ್ರೆ
4. ಶ್ರೀಮತಿ ಡಾ॥ ವೀಣಾ, ವೈದ್ಯರು, ನಾಗರಾಜ್ ಹೆರಿಗೆ ಆಸ್ಪತ್ರೆ
5. ಶ್ರೀ ಶಿವಕುಮಾರಯ್ಯ, ಹಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಹನಿಕೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ ಶರಣಬಸವ, ಮಾರ್ಷಲ್
8. ಶ್ರೀ ಮಹೇಶ್, ಘನತ್ಯಾಜ್ಯ ಮೇಲ್ವಿಚಾರಕರು
9. ಶ್ರೀ ರಮೇಶ್ ಪಶುಪಾಲನೆ ಪರಿವೀಕ್ಷಕರು
10. ಶ್ರೀ ಶ್ರೀನಾಥ್ ಅರಣ್ಯ ಇಲಾಖೆ
11. ಶ್ರೀ ಎನ್.ಹೆಚ್. ನಾಗರಾಜ್, ತೋಟಗಾರಿಕೆ ಇಲಾಖೆ

ಶ್ರೀ ಸೋಮಶೇಖರ್.ಜಿ.ಎಲ್ ಕಾರ್ಯದರ್ಶಿಗಳು ಹಾಗೂ ಸಂಚಾಲಕರು, ವಾರ್ಡ್ ನಂ. 107ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಈ ಕೆಳಗಿನ ಅಂಶಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

1. ಶ್ರೀ ಲಿಂಗಣ್ಣ ಗುಂಡಳ್ಳಿ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ಕೋವಿಡ್ ನಿರ್ವಹಣೆಯ ಬಗ್ಗೆ ಸಭೆಯಲ್ಲಿ ಹಾಜರಿದ್ದ ವೈದ್ಯರಿಗೆ ವಾರ್ಡ್ ಸಮಿತಿ ಸದಸ್ಯರಿಗೆ ವಿವರಿಸಲು ತಿಳಿಸಿದರು. ಈ ಬಗ್ಗೆ ಶ್ರೀಮತಿ ಡಾ॥ ಪೂಜಾ, ವೈದ್ಯರು ಮಾತನಾಡುತ್ತಾ ರಾಜಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ನಾಗರಾಜ್ ಹೆರಿಗೆ ಆಸ್ಪತ್ರೆಯನ್ನು ಟ್ರಯಾಜ್ ಸೆಂಟರಾಗಿ ಪರಿವರ್ತಿಸಲಾಗಿರುತ್ತದೆ.

ಮುಂದುವರೆದು, ಇನ್ನು ಮುಂದೆ ಕೋವಿಡ್ ಸೋಂಕು ಇರುವ ವ್ಯಕ್ತಿಯನ್ನು ಟ್ರಯಾಜ್ ಸೆಂಟರ್‌ನಲ್ಲಿ ಪರೀಕ್ಷಿಸಿ ರೋಗಿಗೆ ಯಾವ ರೀತಿಯ ಚಿಕಿತ್ಸೆ ಅವಶ್ಯಕತೆ ಇರುವುದರ ಮೇಲೆ ಸದರಿ ರೋಗಿಯನ್ನು ಹೋಂ ಐಸೋಲೇಷನ್, ಕೋವಿಡ್ ಕೇರ್ ಸೆಂಟರ್ ಮತ್ತು ಆಸ್ಪತ್ರೆಗಳಿಗೆ ದಾಖಲಿಸುವ ಬಗ್ಗೆ ಟ್ರಯಾಜ್ ಸೆಂಟರ್ ನಲ್ಲಿ ತೀರ್ಮಾನಿಸಲಾಗುವುದೆಂದು ಸಭೆಗೆ ತಿಳಿಸಿದರು. ಮತ್ತು ವಾರ್ಡಿನಲ್ಲಿ ಲಸಿಕೆಯನ್ನು ನೀಡಲು ಶಿವನಗರ ವ್ಯಾಪ್ತಿಯಲ್ಲಿ ಬರುವ ಗಂಗಮ್ಮ ತಿಮ್ಮಯ್ಯ ಶಾಲೆಯಲ್ಲಿ 45 ವರ್ಷ ಮೇಲ್ಪಟ್ಟ ವ್ಯಕ್ತಿಗಳಿಗೆ ಲಸಿಕೆಯನ್ನು ನೀಡಲಾಗುತ್ತಿರುತ್ತದೆ. ಆದುದರಿಂದ ಸಭೆಯಲ್ಲಿ ಹಾಜರಿರುವ ಎಲ್ಲಾ ವಾರ್ಡ್ ಕಮಿಟಿ ಸದಸ್ಯರುಗಳು ಮತ್ತು ಎನ್.ಜಿ.ಓ. ಗಳು ವಾರ್ಡ್ ವ್ಯಾಪ್ತಿಯಲ್ಲಿ ಬರುವ ನಿವಾಸಿಗಳಿಗೆ ಲಸಿಕೆಯನ್ನು ಪಡೆಯಲು ಮತ್ತು ಕೋವಿಡ್ ಟೆಸ್ಟ್‌ನ್ನು ಮಾಡಿಸಲು ತಿಳಿಸಬೇಕೆಂದು ಸಭೆಗೆ ತಿಳಿಸಿದರು.

2. ಶ್ರೀ ವೆಂಕಟೇಶ್ ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತಾ, 13ನೇ ಮುಖ್ಯ ರಸ್ತೆ, 3ನೇ ವೈ ಬ್ಲಾಕ್, ರಾಜಾಜಿನಗರ ಇಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ. ವತಿಯಿಂದ ಒಳಚರಂಡಿ ಕಾಮಗಾರಿಯನ್ನು ನಿರ್ವಹಿಸಿ, ರಸ್ತೆಯನ್ನು ದುರಸ್ಥಿಪಡಿಸದೆ ಇರುವುದರಿಂದ ಸ್ಥಳೀಯ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಸಹಾಯಕ ಅಭಿಯಂತರರು ಪರಿಶೀಲಿಸಿ, ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

3. ವಾರ್ಡ್ ಕಮಿಟಿ ಸದಸ್ಯರು ಮಾತನಾಡುತ್ತ, 12ನೇ ಮುಖ್ಯ ರಸ್ತೆ, ರಾಜಾಜಿನಗರ ಇಲ್ಲಿ ಮರದ ಕೊಂಬೆಯು ಕೆಳಗೆ ಬಾಗಿರುವುದರಿಂದ ರಸ್ತೆಯಲ್ಲಿ ಸಂಚರಿಸುವಾಗ ದೊಡ್ಡ ವಾಹನಗಳಿಗೆ ಕೊಂಬೆಯು ಅಡ್ಡ ಬರುತ್ತಿರುವುದರಿಂದ ಅಪಘಾತವಾಗುವ ಸಂಭವವಿದ್ದು, ಸದರಿ ಕೊಂಬೆಯನ್ನು ತೆರವುಗೊಳಿಸಬೇಕೆಂದು ಸಭೆಗೆ ತಿಳಿಸಿದರು. ಇದಕ್ಕೆ ಉತ್ತರವಾಗಿ ಸಭೆಯಲ್ಲಿ ಹಾಜರಿದ್ದ ಅರಣ್ಯ ಇಲಾಖೆಯವರು ಪರಿಶೀಲಿಸಿ, ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

Scanned by CamScanner

4. ನೋಡಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಮರದ ಕೊಂಬೆಗಳು ಒಣಗಿದ್ದು, ಮಳೆಗಾಲ ಪ್ರಾರಂಭವಾಗುತ್ತಿರುವುದರಿಂದ ಗಾಳಿ ಬೀಸಿದಾಗ ಮರದ ಒಣಗಿದ ಕೊಂಬೆಗಳು ವಾಹನ ಸವಾರರ ಮೇಲೆ ಬಿದ್ದು, ಅಪಘಾತವಾಗುವ ಸಂಭವವಿರುತ್ತದೆ. ಆದುದರಿಂದ ಅರಣ್ಯ ಇಲಾಖೆಯವರು ಪರಿಶೀಲಿಸಿ, ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು.

ಎಲ್ಲಾ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ತಿಳಿಸುವ ದೂರುಗಳನ್ನು ಸರಿಪಡಿಸಿ, ಮುಂದಿನ ಸಭೆಯಲ್ಲಿ ವರದಿಯನ್ನು ನೀಡುವಂತೆ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 107

ಸಹಿ/-
ಶ್ರೀ ಲಿಂಗಣ್ಣ ಗುಂಡಳ್ಳಿ
ನೋಡಲ್ ಅಧಿಕಾರಿಗಳು

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು [ಪಶ್ಚಿಮ] ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು , ರಾಜಾಜಿನಗರ ವಿಭಾಗ/ಯೋಜನೆ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಘನತ್ಯಾಜ್ಯ] ರಾಜಾಜಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬಿ.ಡಬ್ಲ್ಯೂ.ಎಸ್.ಎಸ್.ಬಿ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೀದಿ ದೀಪಗಳ ನಿರ್ವಹಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ಬೆಸ್ಕಾಂ] ಉಪವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು [ರಸ್ತೆ ಮತ್ತು ಮೂಲ ಭೂತ ಸೌಕರ್ಯ.] ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ
10. ಕಲ್ಯಾಣ ಅಧಿಕಾರಿ, ಪಶ್ಚಿಮ ವಲಯ, ಬಿ.ಬಿ.ಎಂ.ಪಿ. ರವರ ಮಾಹಿತಿಗಾಗಿ ಸಲ್ಲಿಸಿದೆ.
11. ಸಂಚಾರಿ ಪೋಲಿಸ್ ಠಾಣೆ, ರಾಜಾಜಿನಗರ/ವಿಜಯನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೋಲಿಸ್ ಠಾಣೆ, ರಾಜಾಜಿನಗರ/ಬಸವೇಶ್ವರನಗರ, ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಅರಣ್ಯಾಧಿಕಾರಿ, ಬಿ.ಬಿ.ಎಂ.ಪಿ. ಪಶ್ಚಿಮ ರವರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner